ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
**Bangalore Development Authority**

ಸಂಖ್ಯೆ : ಬೆಂಅಪ್ರಾ/ನಮ/ಅಸ/ಅಅ-2/ತಾಸ-3/ಉ/44/2025-26
No.

ದಿನಾಂಕ : 17.03.2026
Date :

ಬೆಂಗಳೂರು
ಅನುಸೂಚಿ–ಎ ೫
(ಉಪವಿಧಿ ಸಂಖ್ಯೆ: 4.1)

ಆಯುಕ್ತರವರ ಕಛೇರಿ,
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ,
ಬೆಂಗಳೂರು.

## ನಕ್ಷೆ ಮಂಜೂರಾತಿ ಪತ್ರ

ಇವರಿಗೆ,

M/s Brigade Enterprises limited,
29th & 30th Floor, World Trade Centre,
Brigade Gateway Campus,
#26/1, Dr. Rajkumar Road,
Malleshwaram, Rajajinagar,
Bangalore - 560 055.

ಮಾನ್ಯರೇ,

ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, ಚೀಮಸಂದ್ರ ಗ್ರಾಮದ ಸರ್ವೆ ನಂ. 17/1 ರಲ್ಲಿ 2ಎ-25ಗುಂ, ಸರ್ವೆ ನಂ. 17/2 ರಲ್ಲಿ 3ಎ-05ಗುಂ, ಸರ್ವೆ ನಂ. 17/3 ರಲ್ಲಿ 0ಎ-31ಗುಂಟೆ, ಸರ್ವೆ ನಂ. 17/4 ರಲ್ಲಿ 3ಎ-00ಗುಂ ಮತ್ತು ಸರ್ವೆ ನಂ. 17/5 ರಲ್ಲಿ 1ಎ-09ಗುಂಟೆ ಒಟ್ಟು 10ಎ-30ಗುಂಟೆ ವಿಸ್ತೀರ್ಣದ ಜಮೀನುಗಳಲ್ಲಿ ಅನುಮೋದನೆಯಾಗಿರುವ ವಸತಿ ಉದ್ದೇಶದ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿರುವ Tower-A, B, C, D, E ಗಳ ಪೈಕಿ ಈ ಕೆಳಕಂಡ Tower-A & Tower-B ಬಹುಮಹಡಿ ವಸತಿ ಸಮುಚ್ಚಯ ಕಟ್ಟಡಗಳನ್ನು ಮಾತ್ರ ನಿರ್ಮಿಸಲು ಉದ್ದೇಶಿಸಿದ್ದು, ನಕ್ಷೆ ಮಂಜೂರಾತಿಯನ್ನು ನೀಡಲು ಕೋರಿರುತ್ತೀರಿ.

| Sl No. | Building name | No of Floors | No of Units |
|---|---|---|---|
| 1. | Tower –A (Common basement) | 3BF+GF+43UF+TF | 428 |
| 2. | Tower- B (Common basement) | 3BF+GF+43UF+TF | 345 |
| 3. | Tower-A & Tower-Bರ ನೆಲಮಹಡಿಯಲ್ಲಿ 271.34 ಚ.ಮೀ ಅಳತೆಯ ಅಮೆನಿಟಿ ಕಟ್ಟಡ. | | - |
| | Total | | 773 Nos |

ಈ ಸಂಬಂಧ ಮಾನ್ಯ ಅಭಿಯಂತರ ಸದಸ್ಯರವರು ದಿನಾಂಕ: 11.03.2026 ರಂದು ನಕ್ಷೆ ಮಂಜೂರಾತಿಗೆ ಅನುಮೋದನೆ ನೀಡಿದ್ದು, ಅದರಂತೆ ಚಲನ್ ನಂ. GN26039386, ದಿನಾಂಕ:12.03.2026 ರಂದು ಒಟ್ಟು ರೂ. 6,02,76,196.00/- ಗಳನ್ನು ಪ್ರಾಧಿಕಾರಕ್ಕೆ ಪಾವತಿಸಿರುತ್ತೀರಿ.

ಆದ್ದರಿಂದ, ಈ ಕೆಳಕಂಡ ಷರತ್ತುಗಳನ್ನು ವಿಧಿಸಿ ನಕ್ಷೆ ಮಂಜೂರಾತಿ ನೀಡಲಾಗಿದ್ದು, ಸದರಿ ಮಂಜೂರಾತಿ ಅವಧಿಯು ದಿನಾಂಕ: 17.03.2026 ರಿಂದ 16.03.2028 ವರೆಗೆ ಎರಡು ವರ್ಷಗಳ ಅವಧಿಗೆ ಮಾತ್ರ ಮಾನ್ಯತೆ ಪಡೆದಿರುತ್ತದೆ ಎಂದು ಈ ಮೂಲಕ ತಿಳಿಯಪಡಿಸಿದೆ.

P.T.O...

ಆಯುಕ್ತರ ಪರವಾಗಿ
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು

## ಪಾಲಿಸಬೇಕಾದ ಷರತ್ತುಗಳು

1) ಪ್ರಾಧಿಕಾರದ ನಗರ ಯೋಜನಾ ವಿಭಾಗದಿಂದ ಅನುಮೋದಿಸಿರುವ ಕಾರ್ಯಾದೇಶ ಸಂಖ್ಯೆ: ಬೆಂಅಪ್ರಾ/ನಯೋಸ/ DLP-96/4200/2025-26, ದಿನಾಂಕ: 25.02.2026ರಲ್ಲಿ ವಿಧಿಸಿರುವ ಎಲ್ಲಾ ಷರತ್ತುಗಳನ್ನು ಕಟ್ಟು ನಿಟ್ಟಾಗಿ ಪಾಲಿಸತಕ್ಕದ್ದು.

2) ಮಾನ್ಯ ಸರ್ವೋಚ್ಛ ನ್ಯಾಯಾಲಯದ WP (Civil) No: 14664/2024, ದಿನಾಂಕ: 17.12.2024 ರಲ್ಲಿ ನೀಡಿರುವ ನಿರ್ದೇಶನಗಳನ್ನು ಕಡ್ಡಾಯವಾಗಿ ಪಾಲಿಸುವುದು.

3) ಪ್ರಮಾಣ ಪತ್ರದಲ್ಲಿ ತಿಳಿಸಿರುವಂತೆ SEIAA ಸಂಸ್ಥೆಯಿಂದ ನಿರಾಕ್ಷೇಪಣಾ ಪತ್ರ, BESCOM ಸಂಸ್ಥೆಯಿಂದ ನಿರಾಕ್ಷೇಪಣಾ ಪತ್ರ ಹಾಗೂ RMP-2015 ರಂತೆ Maste Plan Road ಗಾಗಿ ಮೀಸಲಿಟ್ಟ ಜಾಗವನ್ನು ಸಕ್ಷಮ ಪ್ರಾಧಿಕಾರಕ್ಕೆ ಹಸ್ತಾಂತರಿಸಿ ಪರಿತ್ಯಾಜನಾ ಪತ್ರವನ್ನು ಪ್ರಾರಂಭಿಕ ಪ್ರಮಾಣ ಪತ್ರ ಪಡೆಯುವ ಮುನ್ನ ಪ್ರಾಧಿಕಾರಕ್ಕೆ ಕಡ್ಡಾಯವಾಗಿ ಸಲ್ಲಿಸುವುದು.

4) ನಕ್ಷೆಯಲ್ಲಿ ವಿವಿಧ ಉದ್ದೇಶಕ್ಕಾಗಿ ಗುರುತಿಸಿರುವ ಪ್ರದೇಶಗಳಲ್ಲಿ ಬೇರೆ ಯಾವುದೇ ಉದ್ದೇಶಕ್ಕಾಗಿ ಉಪಯೋಗಿಸತಕ್ಕದ್ದಲ್ಲ.

5) ಅಭಿವೃದ್ಧಿದಾರರು ಕಟ್ಟಡದ ಕಾಮಗಾರಿ ಪ್ರಾರಂಭಿಸುವ ಮುನ್ನ ಸದರಿ ಕಟ್ಟಡಗಳಲ್ಲಿ ಕೆಲಸ ನಿರ್ವಹಿಸುವ ಕಾರ್ಮಿಕರುಗಳಿಗೆ ಶೌಚಾಲಯಗಳನ್ನು ಕಡ್ಡಾಯವಾಗಿ ನಿರ್ಮಿಸತಕ್ಕದ್ದು ಹಾಗೂ ಸದರಿ ಸೂಚನೆಯನ್ನು ಕಟ್ಟುನಿಟ್ಟಾಗಿ ಪಾಲಿಸುವುದು ಇಲ್ಲವಾದಲ್ಲಿ ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರವನ್ನು ನೀಡಲಾಗುವುದಿಲ್ಲ ಹಾಗೂ ನೀಡಲಾಗಿರುವ ನಕ್ಷೆ ಮಂಜೂರಾತಿಯನ್ನು ಯಾವುದೇ ಮುನ್ಸೂಚನೆಯಿಲ್ಲದೆ ರದ್ದುಪಡಿಸಲಾಗುವುದು.

6) ಅಭಿವೃದ್ಧಿದಾರರು ಭದ್ರತಾ ಸಿಬ್ಬಂದಿಯವರನ್ನು ನೇಮಿಸಿ ಕಟ್ಟಡ ನಿರ್ಮಾಣದ ಪ್ರದೇಶದ ಒಳಗೆ ಹೋಗಲು ಮತ್ತು ಹೊರಗೆ ಬರಲು ವಾಹನ ಸಂಚಾರ ವ್ಯವಸ್ಥೆಯಲ್ಲಿ ಅಡಚಣೆ ಉಂಟಾಗದಂತೆ ವ್ಯವಸ್ಥೆ ಕಲ್ಪಿಸಿ ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತೊಂದರೆಯಾಗದಂತೆ ನೋಡಿಕೊಳ್ಳತಕ್ಕದ್ದು, ಹಾಗೂ ವಾಹನ ತಪಾಸಣೆಗೆ ಮತ್ತು ಭದ್ರತಾ ವ್ಯವಸ್ಥೆಯನ್ನು ಸ್ವತ್ತಿನ ಒಳಭಾಗದಲ್ಲಿ ಅಳವಡಿಸಿ ನಿರ್ವಹಿಸುವುದು.

7) ಅರ್ಜಿದಾರರು ಶಾಸನಬದ್ಧ ಸಂಸ್ಥೆಗಳಾದ ಬಿಡಿಎ / ಜಿಬಿಎ / ನಗರ ಸಭೆ / ಪಂಚಾಯತಿಗೆ ಯಾವುದಾದರೂ ಬಾಕಿ ಶುಲ್ಕಗಳನ್ನು ಪಾವತಿಸಬೇಕಿದ್ದಲ್ಲಿ ಅಂತಹ ಸಂಸ್ಥೆಗಳು ವಿಧಿಸುವ ಶುಲ್ಕವನ್ನು ಪಾವತಿಸತಕ್ಕದ್ದು.

8) ಮಳೆ ನೀರು ಕೊಯ್ಲನ್ನು ಬೆಂಗಳೂರು ಜಲಮಂಡಳಿ ರವರು ನಿಗಧಿಪಡಿಸಿರುವಂತೆ ಕಡ್ಡಾಯವಾಗಿ ಅಳವಡಿಸುವುದು.

9) ಇಬ್ಬಗೆಯ ಕೊಳವೆ ವಿಧಾನವನ್ನು ಕುಡಿಯುವ ನೀರಿಗಾಗಿ ಹಾಗೂ ಇತರೆ ಉದ್ದೇಶಿತ ವ್ಯವಸ್ಥೆಗಳಿಗಾಗಿ ಅಳವಡಿಸುವುದು.

10) ಒಳಚರಂಡಿ ವ್ಯವಸ್ಥೆಗಾಗಿ ನೈರ್ಮಲ್ಯ ಶುದ್ಧೀಕರಣ ಘಟಕವನ್ನು (S.T.P) ಅಳವಡಿಸಿ ಶುದ್ಧೀಕರಿಸಿದ ನೀರನ್ನು ಮನೆಗಳಲ್ಲಿನ ಶೌಚಾಲಯ, Gardening ಹಾಗೂ ಗಿಡಮರ Lawn ಗಳಿಗಾಗಿ ಕಡ್ಡಾಯವಾಗಿ ಉಪಯೋಗಿಸತಕ್ಕದ್ದು ಮತ್ತು ಇದರಿಂದ ಉತ್ಪತ್ತಿಯಾಗುವ Sewage ಯುಕ್ತ ತ್ಯಾಜ್ಯ ನೀರನ್ನು ಯಾವುದೇ ಕಾರಣಕ್ಕೂ ಕೆರೆ/ಹಳ್ಳ/ಕಣಿವೆ/ಹೊಳೆಗೆ ಬಿಡತಕ್ಕದಲ್ಲ.

11) ಅಭಿವೃದ್ಧಿದಾರರು ಕಟ್ಟಡದ ಆವರಣಗಳಲ್ಲಿ ಗಿಡ ಮರಗಳನ್ನು ಬೆಳೆಸಿ ಪರಿಸರವನ್ನು ಸಂರಕ್ಷಿಸುವ ಷರತ್ತಿಗೆ ಬದ್ಧರಾಗಿರತಕ್ಕದ್ದು.

12) ಅಭಿವೃದ್ಧಿದಾರರು ಕಟ್ಟಡಗಳಿಗೆ ನಿಯಮಾನುಸಾರ ಸೋಲಾರ್ ಉಪಕರಣಗಳನ್ನು ಅಳವಡಿಸಿಕೊಳ್ಳತಕ್ಕದ್ದು.

13) ಸದರಿ ಕಟ್ಟಡವನ್ನು ಪ್ರಾರಂಭಿಸುವ ಮೊದಲು ಪ್ರಾರಂಭಿಕ ಪ್ರಮಾಣ ಪತ್ರವನ್ನು ಹಾಗೂ ಪೂರ್ಣಗೊಂಡ ಕಟ್ಟಡವನ್ನು ಉಪಯೋಗಿಸುವ ಮೊದಲು ಪ್ರಾಧಿಕಾರದಿಂದ ಸ್ವಾಧೀನಾನುಭವ ಪತ್ರವನ್ನು ಕಡ್ಡಾಯವಾಗಿ ಪಡೆಯತಕ್ಕದ್ದು.

14) ಪ್ರಾಧಿಕಾರದಿಂದ ಮಂಜೂರಾದ ನಕ್ಷೆಯ ಪ್ರತಿಯನ್ನು ಕಟ್ಟಡ ನಿರ್ಮಾಣ ಮಾಡುವ ಸ್ಥಳದಲ್ಲಿ ಕಡ್ಡಾಯವಾಗಿ ಪ್ರದರ್ಶಿಸತಕ್ಕದ್ದು.

Next Page...

ಆಯುಕ್ತರ ಪರವಾಗಿ
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು.

15) ಅಭಿವೃದ್ಧಿದಾರರು ಕಟ್ಟಡದ ಸುರಕ್ಷತೆ ಹಾಗೂ ಭದ್ರತೆಯ, ಕಟ್ಟಡದ ರಚನಾತ್ಮತಕ ವಿನ್ಯಾಸದ ಬಗ್ಗೆ ಸಂಪೂರ್ಣವಾಗಿ ಜವಾಬ್ದಾರರಾಗಿರತಕ್ಕದ್ದು. ಈ ಸಂಬಂಧ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಯಾವುದೇ ರೀತಿಯ ಹೊಣೆಗಾರಿಕೆ ಮತ್ತು ಜವಾಬ್ದಾರಿಯನ್ನು ಹೊಂದಿರುವುದಿಲ್ಲ. ಕಟ್ಟಡ ನಿರ್ಮಾಣ ಸಮಯದಲ್ಲಿ ಕಟ್ಟಡ ನಿರ್ಮಾಣಕ್ಕೆ ಕಾರ್ಮಿಕರು ಹಾಗೂ ನಿರ್ಮಾಣದ ಬಗ್ಗೆ ಸೂಕ್ತ ಸುರಕ್ಷತಾ ಮತ್ತು ಭದ್ರತಾ ಕ್ರಮಗಳನ್ನು ಅಳವಡಿಸಿಕೊಳ್ಳತಕ್ಕದ್ದು, ನಿರ್ಮಾಣ ಸಮಯದಲ್ಲಿ ಯಾವುದೇ ತರಹದ ಅನಾಹುತ ಅಥವಾ ಪ್ರಾಣ ಹಾನಿಯಾಗದಂತೆ ಕಟ್ಟುನಿಟ್ಟಿನ ಎಚ್ಚರವಹಿಸತಕ್ಕದ್ದು, ಯಾವುದೇ ತರಹದ ಅನಾಹುತಕ್ಕೆ ಗುತ್ತಿಗೆ ಪಡೆದ ನಿರ್ಮಾಣದಾರರು ನೇರ ಜವಾಬ್ದಾರರಾಗಿರುತ್ತಾರೆ. ಅಂತಹ ಪ್ರಸಂಗ ಕಂಡುಬಂದಲ್ಲಿ ಕಾನೂನು ಕ್ರಮ ಜರುಗಿಸುವುದಲ್ಲದೆ ನೀಡಲಾಗಿರುವ ಮಂಜೂರಾತಿಯು ತಂತಾನೆ ರದ್ದಾಗುತ್ತದೆ.

16) ಅಭಿವೃದ್ಧಿದಾರರು ಕಟ್ಟಡ ನಿರ್ಮಾಣ ಸಮಯದಲ್ಲಿ ಕಟ್ಟಡ ನಿರ್ಮಾಣ ಸಾಮಗ್ರಿಗಳಿಂದಾಗಲೀ ಅಥವಾ ಇನ್ನಾವುದೇ ಕಟ್ಟಡದ ಅನುಪಯುಕ್ತ ಸಾಮಗ್ರಿಗಳಿಂದ ಸಾರ್ವಜನಿಕರಿಗೆ ಹಾಗೂ ಪರಿಸರಕ್ಕೆ ಯಾವುದೇ ತೊಂದರೆಯಾಗದಂತೆ ಸೂಕ್ತ ವ್ಯವಸ್ಥೆ ಮಾಡತಕ್ಕದ್ದು. ಇದಕ್ಕೆ ಅನುಗುಣವಾಗಿ ಬ್ಯಾರಿಕೇಡಿಂಗ್ ನ್ನು ಅಳವಡಿಸಿ ನಿರ್ಮಾಣ ಕಾರ್ಯ ಕೈಗೊಳ್ಳತಕ್ಕದ್ದು.

17) ಯೋಜನೆಯಲ್ಲಿ ಘನ ತ್ಯಾಜ್ಯಗಳನ್ನು ಪ್ಲಾಸ್ಟಿಕ್ ಹಾಗೂ ಇತ್ಯಾದಿಯಾಗಿ ವಿಂಗಡಿಸಿ Compost ಮಾಡಲು ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು ಹಾಗೂ ನಿಗಧಿತ ಸ್ಥಳಕ್ಕೆ ಸಾಗಿಸಲು ಸೂಕ್ತ ವ್ಯವಸ್ಥೆಯನ್ನು ಕಡ್ಡಾಯವಾಗಿ ಮಾಡಿಕೊಳ್ಳತಕ್ಕದ್ದು.

18) ಕಟ್ಟಡ ನಿರ್ಮಾಣ ಸಮಯದಲ್ಲಿ ಸೆಂಟರಿಂಗ್ ಅಥವಾ ಇನ್ನಿತರೇ ಕಾರಣಗಳಿಂದ ಏನಾದರೂ ಅನಾಹುತ ಸಂಭವಿಸಿದ್ದಲ್ಲಿ ಅದಕ್ಕೆ ಅಭಿವೃದ್ಧಿದಾರರೇ ಜವಾಬ್ದಾರರಾಗಿರುತ್ತಾರೆ. ನಕ್ಷೆ ಮಂಜೂರು ಮಾಡಿದ ಯಾವುದೇ ಇಲಾಖೆ / ಸಂಸ್ಥೆಯು ಜವಾಬ್ದಾರರಾಗಿರುವುದಿಲ್ಲ.

19) ಅಭಿವೃದ್ಧಿದಾರರು ನಕ್ಷೆ ಅನುಮೋದನೆ ಸಂಬಂಧ ಜಮೀನಿನ ಮಾಲಿಕತ್ವದ ಬಗ್ಗೆ ಯಾವುದೇ ತಪ್ಪು ಮಾಹಿತಿ / ದಾಖಲಾತಿ ನೀಡಿದ್ದಲ್ಲಿ ಅರ್ಜಿದಾರರಿಗೆ ಯಾವುದೇ ಮುನ್ಸೂಚನೆ ನೀಡದೆ ನಕ್ಷೆ ಅನುಮೋದನೆಯು ತನ್ನಿಂತಾನೇ ರದ್ದಾಗುತ್ತದೆ ಹಾಗೂ ಕಾನೂನು ರೀತ್ಯಾ ಸೂಕ್ತ ಕ್ರಮಕ್ಕೈಗೊಳ್ಳಲಾಗುವುದು.

20) ಅಭಿವೃದ್ಧಿದಾರರು ಕುಡಿಯುವ ನೀರಿನ ಸರಬರಾಜಿಗಾಗಿ ಸಂಬಂಧಪಟ್ಟ ಇಲಾಖೆಯನ್ನು (BWSSB) ಅಥವಾ ಸ್ಥಳೀಯ ಸಂಸ್ಥೆಯನ್ನು ಅವಲಂಭಿಸದೆ ನೀರಿನ ಸರಬರಾಜಿಗಾಗಿ ತಮ್ಮ ಸ್ವಂತ ವ್ಯವಸ್ಥೆಯನ್ನು ಮಾಡಿಕೊಳ್ಳತಕ್ಕದ್ದು.

21) SEIAA ನಿಯಮಗಳನ್ವಯ ಅಭಿವೃದ್ಧಿದಾರರು ವಾಹನ ನಿಲುಗಡೆಯ ಸ್ಥಳದಲ್ಲಿ ಕಡ್ಡಾಯವಾಗಿ ಶೇ 25% ರಷ್ಟು ವಿದ್ಯುತ್ ವಾಹನಗಳಿಗೆ ಚಾರ್ಜಿಂಗ್ ಪಾಯಿಂಟ್ ಗಳನ್ನು ಅಳವಡಿಸತಕ್ಕದ್ದು.

22) FAR ವಿಸ್ತೀರ್ಣದ ಪ್ರತಿ 240 ಮೀ ಗೆ ಒಂದರಂತೆ ಗಿಡವನ್ನು ನೆಟ್ಟು ಪೋಷಿಸುವುದು ಕಡ್ಡಾಯವಾಗಿದೆ.

23) ಪ್ರಶ್ನಿತ ಜಮೀನಿನಲ್ಲಿ RMP- ರಸ್ತೆ / RR / SH / NH ಇತ್ಯಾದಿ ಇದ್ದಲ್ಲಿ ರಸ್ತೆ ಪಂಕ್ತೀಕರಣದಲ್ಲಿ ಬರುವ ಜಮೀನನ್ನು ಪ್ರಾಧಿಕಾರಕ್ಕೆ ನೊಂದಾಯಿತ ಪರಿತ್ಯಾಜನಾ ಪತ್ರದ ಮೂಲಕ ಮುಫತ್ತಾಗಿ ಹಸ್ತಾಂತರಿಸಬೇಕು ಹಾಗೂ ವಿನ್ಯಾಸ ನಕ್ಷೆ ಅನುಮೋದನೆ ಸಂದರ್ಭದಲ್ಲಿ ರಸ್ತೆ ಮಾರ್ಜಿನ್ ಅನ್ನು ಕಡ್ಡಾಯವಾಗಿ ಬಿಡತಕ್ಕದ್ದು.

24) ಅರ್ಜಿದಾರರು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು / ಸರ್ಕಾರವು / ನ್ಯಾಯಾಲಯವು ಕಾಲ ಕಾಲಕ್ಕೆ ವಿಧಿಸುವ ಎಲ್ಲಾ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು.

ಆಯುಕ್ತರ ಪರವಾಗಿ
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು

**ಪ್ರತಿಯನ್ನು:** ಕಾರ್ಯಪಾಲಕ ಅಭಿಯಂತರು (North), ಬೆಂ.ಅ.ಪ್ರಾ, ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಅನುಮೋದಿತ ನಕ್ಷೆಯಂತೆ ಕಾಮಗಾರಿಯನ್ನು ನಿರ್ವಹಿಸುವ ಬಗ್ಗೆ ಪರಿಶೀಲಿಸಿಕೊಳ್ಳಲು ಹಾಗೂ ಮಾನ್ಯ ಸರ್ವೋಚ್ಛ ನ್ಯಾಯಾಲಯದ WP (Civil) No: 14664/2024 ದಿನಾಂಕ: 17.12.2024 ರಲ್ಲಿ ನೀಡಿರುವ ನಿರ್ದೇಶನಗಳನ್ನು ಪಾಲಿಸುವುದು.